



# ಅಕ್ಷಯ ವಸ್ತ್ರವೂ ಅಕ್ಷೋಹಿಣಿ ಸೈನ್ಯವೂ

‘ತಂದೆ ಕೊಡಿಸೋ ಸೀರೆ; ಮದುವೆ ಆಗೋವರೆಗೆ. ತಾಯಿ ಕೊಡಿಸೋ ಸೀರೆ; ತಾಯಿ ಆಗೋವರೆಗೆ, ಬಂಧು ಕೊಡಿಸೋ ಸೀರೇ ಬಣ್ಣ ಹೋಗೋವರೆಗೆ, ಗಂಡಾ ಕೊಡಿಸೋ ಸೀರೇ ಕುಂಕುಮ ಇರುವವರೆಗೆ, ಹೆಣ್ಣಿನ ಜನುಮ ಕಳೆಯುವವರೆಗೆ, ಮಣ್ಣಿನ ಮಮತೆ ಮರೆಯೋವರೆಗೆ’ – ಹೆಣ್ಣು ಮನಸ್ಸುಗಳನ್ನು ಕಲಕಿ ಬಿಡುವ ಅಣ್ಣಾವ್ರ ದನಿಯಲ್ಲಿ ಬಂದ ಈ ಹಾಡಿಗಿರುವ ವೈಟೇಜೇ ಬೇರೆ...

ಸ್ತ್ರೀವಾದ, ಸ್ವಾಭಿಮಾನ ಮುಂತಾದವೆಲ್ಲಾ ಅರ್ಥವಾಗದ ಮುಗ್ಧೆಯರಿಂದ ಹಿಡಿದು, ಅಪ್ಪಟ ಸ್ತ್ರೀವಾದಿಯವರೆಗೂ ಸೀರೆ ಮೆಚ್ಚುಗೆಯ ಉಡುಪೆಂದರೆ ತಪ್ಪಾಗದು. ವಿದೇಶಿ ಹೆಣ್ಣುಗಳೂ ಮೀಟರುಗಟ್ಟಲೆ ಇರುವ ಬಟ್ಟೆಯನ್ನು ಬಗೆ ಬಗೆ ಶೈಲಿಯಲ್ಲಿ ಉಡುವ ಭಾರತೀಯ ನಾರಿಯರ ಸೌಂದರ್ಯ ಪ್ರಜ್ಞೆಗೆ ಬೆರಗಾಗುತ್ತಾರೆ ಎನ್ನುವುದು ಸೀರೆಯ ಮೆರುಗಿನ ಮುಕುಟಕ್ಕೊಂದು ಹಿರಿಮೆಯ ಗರಿ ಸಿಕ್ಕಿಸುತ್ತದೆ. ಗೊರೂರರ, ‘ಅಮೇರಿಕದಲ್ಲಿ ಗೊರೂರು’ ಪುಸ್ತಕದಲ್ಲಿ ಅವರ ಶ್ರೀಮತಿಯವರ ಉಡುಪಾಗಿದ್ದ ಸೀರೆಯನ್ನು ವಿದೇಶಿಯರು ಅಚ್ಚರಿಯಿಂದ ನೋಡಿ ಪ್ರೀತಿಯಿಂದ ಮೆಚ್ಚಿದ ಪ್ರಸಂಗವನ್ನಿಲ್ಲಿ ನೆನಪಿಸಿಕೊಳ್ಳಬಹುದು.

ಮಿಲಿಂದನೆಂಬ ಸಾರ್ವಕಾಲಿಕ ಸುಂದರಾಂಗನ ತಾಯಿ ಉಷಾ ಸೋಮನ್, ಸೀರೆ ಉಟ್ಟೇ ಮ್ಯಾರಥಾನ್ ಓಡುವ, ನಾನಾ ಬಗೆಯ ಕಸರತ್ತು ಮಾಡುವ ವೀಡಿಯೋಗಳನ್ನು ಸೀರೆಯನ್ನು ತೊಡಕಿನ ಬಟ್ಟೆಯೆಂದು ಹಳಿದು ಮೂಗು ಮುರಿಯುವವರಿಗೆ ತೋರಿಸಬೇಕು. ಗದ್ದೆ ನಾಟಿಯಿಂದ ಹಿಡಿದು, ಕಾರ್ಖಾನೆ, ಕೂಲಿ, ಕಚೇರಿ, ಅಡುಗೆಮನೆ, ಮಕ್ಕಳ ಸಂಭಾಳಿಕೆ ಹೀಗೆ ಎಲ್ಲದಕ್ಕೂ ಸೈ ಎನ್ನುವ ಸೀರೆಗೊಂದು ಜೈ ಎನ್ನದಿರಲಾದೀತೆ?

ಮನೆಯ ಟ್ರಂಕಿನಲ್ಲಿ, ಬೀರುವಿನಲ್ಲಿ ಸೀರೆಗಳು ರಾಶಿ ತುಂಬಿದ್ದರೂ, ಅಂಗಡಿಯೊಳಗಿನ ಗೊಂಬೆ ಮೈಮೇಲಿನದ್ದು ತನ್ನಲಿಲ್ಲವಲ್ಲ! ಬೇರೊಬ್ಬಾಕೆ ಉಟ್ಟ ಬಣ್ಣ, ಕಸೂತಿ, ಡಿಸೈನ್, ಫ್ಯಾಬ್ರಿಕ್ ತನ್ನ



